# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: 04 :2020-21 ದಿನಾಂಕ: 05.12.2020

## ಬಾಗಲಗುಂಟೆ ವಾರ್ಡ್-14ರ ವಾರ್ಡ್ ಸಭೆಯ ನಡವಳಿ

ದಿ.05.12.2020 ರಂದು ಬೆಳಗ್ಗೆ 3.30 ಗಂಟೆಗೆ ~~ವಾರ್ಡ್ ಸಮಿತಿ ಸಭೆಯನ್ನು~~ ಶ್ರೀ.ಕೆ.ಮರುಳಸಿದ್ದಪ್ಪ, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಹಾಜರಿದ್ದವರು:

1. ಶ್ರೀ.ಚೇತನ್ ಕೆ.ಎಂ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ಬಾಗಲಗುಂಟೆ ವಾರ್ಡ್ ನಂ.14
2. ಶ್ರೀ.ಕುಮಾರ ಸ್ವಾಮಿ, ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ
3. ಶ್ರೀ.ಮಂಜುನಾಥ್ ಆರ್, ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ
4. ಶ್ರೀ.ಮೋಹನ್, ಹಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
5. ಶ್ರೀ.ಕಮಲ್ ಗದ್ದಿಮನಿ, ಕಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
6. ಶ್ರೀ.ಕೃಷ್ಣಮೂರ್ತಿ, ಡಿಫೆನ್ಸ್ ಬಡಾವಣೆ ನಾಗರೀಕ ಕ್ಷೇಮಾಭಿವೃದ್ದಿ ಸಂಘ ಹಾಗೂ ವಾರ್ಡ್ ಸಮಿತಿ ಸದಸ್ಯರು
7. ಶ್ರೀ.ಜಿ.ಆರ್.ವೇಣುಗೋಪಾಲ್, ಅನುಗ್ರಹ ಶನೇಶ್ಚರ ದೇವಸ್ಥಾನ ಟ್ರಸ್ಟ್, ಮಂಜುನಾಥನಗರ
8. ಶ್ರೀ.ಮುದ್ದ ಹನುಮೇಗೌಡರು ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು, ಸಿಡೇದಹಳ್ಳಿ
9. ಶ್ರೀ.ಗುರುಪ್ರಸಾದ್, ವಲಯಾಧ್ಯಕ್ಷರು, ಲಯನ್ ಸಂಸ್ಥೆ
10. ಶ್ರೀ.ಸದಾಶಿವ, ಎಂ.ಇ.ಐ ಬಡಾವಣೆ ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು

ಶ್ರೀ.ಕೆ.ಮರುಳಸಿದ್ದಪ್ಪ, ನೋಡೆಲ್ ಅಧಿಕಾರಿ, ವಾರ್ಡ್ ನಂ.14, ಬಾಗಲಗುಂಟೆ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಡಿಸೆಂಬರ್ ತಿಂಗಳ ಮೊದಲ ಶನಿವಾರದ ಸಭೆಯನ್ನು ಪ್ರಾರಂಭಿಸಿದರು.

### 1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.

ದಿ.21.11.2020 ರಂದು ನಡೆದ ವಾರ್ಡ್ ಕಮಿಟಿ ಸಭೆಯಲ್ಲಿ ವಾರ್ಡ್ ಸಭೆಯ ಸದಸ್ಯರಾದ ಶ್ರೀ.ಲಕ್ಷ್ಮಿ ವೆಂಕಟೇಶ್ ರವರು ವಾರ್ಡ್‌ನ ಮುನಿಕೊಂಡಪ್ಪ ಬಡಾವಣೆಯ ಮೋರಿಗಳಲ್ಲಿ ಹೂಳು ತುಂಬಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿ ತುರ್ತಾಗಿ ಸದರಿ ಬಡಾವಣೆಗಳ ಮೋರಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸಿದರು. ಅದರಂತೆ ವಾರ್ಡ್ ಅಭಿಯಂತರರು ಸದರಿ ಕಾಮಗಾರಿಯನ್ನು ಕೈಗೊಳ್ಳುವ ಸಂಬಂಧ ಸಿಲ್ಟ್ & ಟ್ರ್ಯಾಕ್ಟರ್ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಮುಕ್ತಾಯಗೊಂಡ ನಂತರ ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ತಿಳಿಸಿದರು

ಶ್ರೀ.ಮುದ್ದ ಹನುಮೇಗೌಡರು, ನಾಗರೀಕ ಹಿತರಕ್ಷಣಾ ಸಮಿತಿ ಸದಸ್ಯರು, 110 ಹಳ್ಳಿ ವ್ಯಾಪ್ತಿಯಲ್ಲಿ ಬರುವ ಸಿಡೇದಹಳ್ಳಿ ಗ್ರಾಮ ಪರಿಮಿತಿಯಲ್ಲಿ ಹಲವಾರು ಕೊಳವೆ ಬಾವಿಗಳು ದುರಸ್ಥಿಗೊಂಡಿರುವುದರಿಂದ ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜು ಮಾಡಲು ತೊಂದರೆಯಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸಹಾಯಕ ಅಭಿಯಂತರರು ಪ್ರತಿಕ್ರಿಯಿಸಿ ಕೊಳವೆ ಬಾವಿ ದುರಸ್ಥಿಗೊಳಿಸುವ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಮುಗಿದ ನಂತರ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.



Scanned with CamScanner

**2. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ**

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಪ್ರತೀ ದಿನ 02 ಮೊಬೈಲ್ ಟೀಂ ನ ಮೂಲಕ ರೋಗ ಪತ್ತೆ ಕಾರ್ಯವನ್ನು ನಡೆಸಲಾಗುತ್ತಿರುತ್ತದೆ. ಬಾಗಲಗುಂಟೆ ವಾರ್ಡ್ ನಂ.14ರ ವ್ಯಾಪ್ತಿಯಲ್ಲಿ ಒಟ್ಟು ಪಾಸಿಟಿವ್ ಕೇಸ್ 2481, ಬಿಡುಗಡೆ 2108 ಹಾಗೂ ಒಟ್ಟು Active case ಪ್ರಕರಣಗಳು 336 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಪ್ರತೀ ದಿನ ರಸ್ತೆ ಮುಂಗಟ್ಟುಗಳಲ್ಲಿರುವ ಸಾರ್ವಜನಿಕರುಗಳಿಗೆ ಕೋವಿಡ್ ಪರೀಕ್ಷೆ ನಡೆಸಲಾಗುತ್ತಿರುತ್ತದೆ. ಹಾಗೂ ಕಡ್ಡಾಯವಾಗಿ ಮಾಸ್ಕ್ ಧರಿಸುವ ಸಂಬಂಧ ಪೀಲ್ಡ್ ಮಾರ್ಷಲ್‌ಗಳ ಸಮನ್ವಯದೊಂದಿಗೆ ಜನಜಾಗೃತಿ ಮೂಡಿಸಲಾಗುತ್ತಿದೆ ಹಾಗೂ ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುವವರಿಗೆ ಕಡ್ಡಾಯವಾಗಿ ನಿಯಮಾನುಸಾರ ರೂ.250.00 ಗಳನ್ನು ದಂಢ ವಿಧಿಸಿ ಕ್ರಮ ಜರುಗಿಸಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ವಿವರಿಸಿದರು.

**3. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿ ಸಂಬಂಧಿಸಿದ ವಿಷಯುಗಳ ಬಗ್ಗೆ.**

ಶ್ರೀ.ಮುದ್ದ ಹನುಮೇಗೌಡರು, ನಾಗರೀಕ ಹಿತರಕ್ಷಣಾ ಸಮಿತಿ ಸದಸ್ಯರು, ಎಂ.ಇ.ಐ ಬಡಾವಣೆಯ ಮುಖ್ಯರಸ್ತೆಯ ಬದಿಯಲ್ಲಿರುವ Gate Valve Chamber Pipe ರಸ್ತೆಯ ಮಟ್ಟಕ್ಕಿಂತ ಮೇಲಿರುವ ಕಾರಣ ವಾಹನಗಳ ರಸ್ತೆ ತಿರುವು ಸಂದರ್ಭಗಳಲ್ಲಿ ರಸ್ತೆ ಅಪಘಾತ ಉಂಟಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಸಂಬಂಧ ಶ್ರೀ.ಕುಮಾರ ಸ್ವಾಮಿ, ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ತುರ್ತು ಕ್ರಮವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಮುಂದುವರೆದು ವಾರ್ಡ್ ಸಮಿತಿ ಸದಸ್ಯರುಗಳಾದ ಶ್ರೀ.ಕೃಷ್ಣಮೂರ್ತಿ, ಗುರುಪ್ರಸಾದ್, ವೇಣುಗೋಪಾಲ್ ಹಾಗೂ ಸದಾಶಿವ್ ರವರುಗಳು ವಾರ್ಡಿನಲ್ಲಿರುವ ನೀರುಗಂಟಿದಾರರು ಒಂದೇ ಪಾಳಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಸದರಿಯವರುಗಳನ್ನು ವಿವಿಧ ಪಾಳಿಗಳಲ್ಲಿ ಕಾರ್ಯ ನಿರ್ವಹಿಸಲು ಅನುವು ಮಾಡಿಕೊಡುವಂತೆ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಪರಿಶೀಲಿಸುವುದಾಗಿ ಶ್ರೀ.ಕುಮಾರ ಸ್ವಾಮಿ, ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಸಭೆಯಲ್ಲಿ ತಿಳಿಸಿದರು

ವಾರ್ಡ್ ಸದಸ್ಯರುಗಳು ಭುವನೇಶ್ವರಿನಗರ 7ನೇ ಮುಖ್ಯರಸ್ತೆಯಲ್ಲಿ ಯು.ಜಿ.ಡಿ ಸಂಪರ್ಕ ಇಲ್ಲದಿರುವುದಾಗಿ ಹಾಗೂ ಡಿಫೆನ್ಸ್ ಕಾಲೋನಿಯ ಸೀನಪ್ಪ ಗಾರ್ಡನ್‌ನಲ್ಲಿ ನೀರಿನ ಸಂಪರ್ಕ ಇಲ್ಲದಿರುವುದಾಗಿ ಮತ್ತು ಬಾಗಲಗುಂಟೆಯ ವಾರ್ಡ್‌ನ ಅನೇಕ ಕಡೆಗಳಲ್ಲಿ ಅನಧೀಕೃತ ನೀರಿನ ಸಂಪರ್ಕ ಹೊಂದಿರುವುದಾಗಿ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ಶ್ರೀ.ಕುಮಾರ ಸ್ವಾಮಿ, ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಸಭೆಯಲ್ಲಿ ತಿಳಿಸಿದರು

**4. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.**

ವಾರ್ಡ್ ಸದಸ್ಯರುಗಳು ಬಾಗಲಗುಂಟೆ ವ್ಯಾಪ್ತಿಯ ಶೂಟಿಂಗ್ ಬಂಗಲೆ, ರಾಮಯ್ಯ ಬಡಾವಣೆ & ಡಾಮಿನೋಸ್ ಪಕ್ಕ ಕಸದ ರಾಶಿಗೆ ಬೆಂಕಿ ಹಾಕುತ್ತಿದ್ದು, ಇದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿ ದೂರಿ, ವಾರ್ಡ್ ವ್ಯಾಪ್ತಿಯಲ್ಲಿ ಸಿ.ಸಿ ಕ್ಯಾಮೆರಾಗಳನ್ನು ಅಳವಡಿಸದೇ ಇರುವುದರಿಂದ ರಸ್ತೆಗಳ ಬದಿಯಲ್ಲಿ ಕಸ ಹಾಕುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು. ಮುಂದುವರೆದು ಅನಧೀಕೃತವಾಗಿ ರಸ್ತೆ ಬದಿಗಳಲ್ಲಿ ಕಸ ಹಾಕುತ್ತಿರುವ ಸ್ಥಳಗಳಲ್ಲಿ ಸಿ.ಸಿ ಕ್ಯಾಮೆರಾ ಅಳವಡಿಸುವುದರಿಂದ ಕಸ ಹಾಕುತ್ತಿರುವ ವ್ಯಕ್ತಿಗಳ ಮೇಲೆ ಕ್ರಮ ಕೈಗೊಳ್ಳಬಹುದಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ.ಮೋಹನ್ ರವರಿಗೆ ಸೂಕ್ತ ಕ್ರಮ ಕೈಗೊಳ್ಳಲು ಸಭೆಯಲ್ಲಿ ನೋಡಲ್ ಅಧಿಕಾರಿಗಳು ತಿಳಿಸಿದರು.

**5.ವಾರ್ಡ್ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ದಿ ಕಾಮಗಾರಿಗಳ ಬಗ್ಗೆ.**

ಬಾಗಲಗುಂಟೆ ವಾರ್ಡ್ ನಂ.14ರ ಕಿರ್ಲೋಸ್ಕರ್ ಬಡಾವಣೆ, ಸಿದ್ದೇಶ್ವರ ಮುಖ್ಯರಸ್ತೆಗಳಲ್ಲಿ ಡಾಂಬರೀಕರಣ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತದೆ ಎಂದು ಸಭೆಯಲ್ಲಿ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ವಿವಿಧ ಬಡಾವಣೆಗಳ ಕ್ಷೇಮಾಭಿವೃದ್ದಿ ಸಂಘದ ಸದಸ್ಯರಿಗೆ ತಿಳಿಸಿದರು.

**6. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ.**

ಬಾಗಲಗುಂಟೆ ವಾರ್ಡ್‌ನ ಎಂ.ಎಸ್.ರಾಮಯ್ಯ ಬಡಾವಣೆ, ಹಾವನೂರು ಬಡಾವಣೆಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಿರುವುದಾಗಿ ಹಾಗೂ ಉಳಿಕೆ ಬಡಾವಣೆಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲಾಗುವುದೆಂದು ಸಭೆಯಲ್ಲಿ ವಾರ್ಡ್ ಅಭಿಯಂತರರು ತಿಳಿಸಿದರು.

Scanned with CamScanner

7. ಮಳೆನೀರು ಚರಂಡಿ ಬಗ್ಗೆ.

ಶ್ರೀ.ಕೃಷ್ಣಮೂರ್ತಿ ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ ಹಾಗೂ ಇತರರು ವಾರ್ಡ್ ವ್ಯಾಪ್ತಿಯಲ್ಲಿ ಮಳೆನೀರು ಚರಂಡಿಗಳಲ್ಲಿ ಹೂಳು ತುಂಬಿರುವ ಬಗ್ಗೆ ಹಾಗೂ ಡಿಫೆನ್ಸ್ ಕಾಲೋನಿ 7ನೇ ಅಡ್ಡರಸ್ತೆಯಲ್ಲಿ ಕಲ್ವರ್ಟ್ ನಿರ್ಮಿಸುವ ಬಗ್ಗೆ ಪ್ರಸ್ತಾಪಿಸಿದರು. ಈ ಬಗ್ಗೆ ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಿ ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಜರುಗಿಸಲು ಮಳೆನೀರು ವಿಭಾಗದ ಅಭಿಯಂತರರಿಗೆ ತಿಳಿಸಲು ಮತ್ತು ಮುಂದಿನ ಸಭೆಗೆ ಆಹ್ವಾನಿಸುವಂತೆ ನೋಡೆಲ್ ಅಧಿಕಾರಿಗಳು ಸಹಾಯಕ ಅಭಿಯಂತರರಿಗೆ ತಿಳಿಸಿದರು.

8. ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕ ಶೌಚಾಲಯ ಹಾಗೂ ಪಾದಚಾರಿ ಮಾರ್ಗದ ವ್ಯವಸ್ಥೆ ಬಗ್ಗೆ.

BBMP Mycity Mybudget 2021-22 ಆಯವ್ಯಯದಲ್ಲಿ ಮಾನ್ಯ ಆಯುಕ್ತರು, ಬಿಬಿಎಂಪಿ ರವರು ಸಾರ್ವಜನಿಕ ಶೌಚಾಲಯ ಹಾಗೂ ಪಾದಚಾರಿ ಮಾರ್ಗಗಳ ಅಭಿವೃದ್ಧಿ ಸಂಬಂಧ ವಾರ್ಡ್ ನೋಡೆಲ್ ಅಧಿಕಾರಿಗಳು ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಿ, ಸರ್ವಾನುಮತದಿಂದ ಸ್ಥಳಗಳನ್ನು ಗುರುತಿಸಿ, ಸಭಾ ನಡವಳಿ ಮುಖಾಂತರ ಪ್ರಸ್ತಾವನೆಯನ್ನು ಸಲ್ಲಿಸಲು ವಾರ್ಡ್‌ನ ನೋಡೆಲ್ ಅಧಿಕಾರಿಗಳಿಗೆ ತಿಳಿಸಿರುವುದಾಗಿ ಸಭೆಯಲ್ಲಿ ವಾರ್ಡ್‌ನ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು. ವಾರ್ಡ್ ಸದಸ್ಯರುಗಳು ಬಾಗಲಗುಂಟೆ ವಾರ್ಡ್‌ನಲ್ಲಿ ಜನ ಸಂದಣಿ ಹೆಚ್ಚಿರುವ ಭಾಗಗಳಾದ ಬೋನ್‌ಮಿಲ್ ಪಕ್ಕ, ಕಿರ್ಲೋಸ್ಕರ್ ಬಡಾವಣೆಯ ಪ್ರವೇಶ ದ್ವಾರದ ಹತ್ತಿರ, ಹೆಸರಘಟ್ಟ ಮುಖ್ಯರಸ್ತೆಯ ತ್ರಿವೇಣಿ ಪೆಟ್ರೋಲ್ ಬಂಕ್ ಹತ್ತಿರ ಸಾರ್ವಜನಿಕ ಶೌಚಾಲಯ ಹಾಗೂ ಎಂ.ಇ.ಐ ಬಡಾವಣೆ ಮುಖ್ಯರಸ್ತೆ, ಕಿರ್ಲೋಸ್ಕರ್ ಬಡಾವಣೆ ಮುಖ್ಯರಸ್ತೆ, ಸಿದ್ದೇಶ್ವರ ಬಡಾವಣೆ ಮುಖ್ಯರಸ್ತೆ, ರಾಮಯ್ಯ ಬಡಾವಣೆ ಮುಖ್ಯರಸ್ತೆ ಮತ್ತು ವಿಡಿಯಾ ಫ್ಯಾಕ್ಟರಿಯಿಂದ ಶನಿಮಹಾತ್ಮ ದೇವಸ್ಥಾನ ಮುಖ್ಯರಸ್ತೆ ಹಾಗೂ ಬಾಗಲಗುಂಟೆ ಮುಖ್ಯರಸ್ತೆಗಳಲ್ಲಿ ಪಾದಚಾರಿ ಮಾರ್ಗಗಳ ಅಭಿವೃದ್ಧಿಪಡಿಸಬಹುದಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಪರಿಶೀಲಿಸಿ ಪ್ರಸ್ತಾವನೆ ಸಲ್ಲಿಸಲು ಸಹಾಯಕ ಅಭಿಯಂತರರಿಗೆ ನೋಡೆಲ್ ಅಧಿಕಾರಿಗಳು ಸೂಚಿಸಿದರು.

ಅಂತಿಮವಾಗಿ ನೋಡೆಲ್ ಅಧಿಕಾರಿ ಮಾತನಾಡಿ, ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು ಎಲ್ಲಾ ಇಲಾಖೆಗಳ ಸಮನ್ವಯತೆ ಇಂದ ಕೆಲಸ ನಿರ್ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ನೋಡೆಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 14, ಬಾಗಲಗುಂಟೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧಿಕಾರಿಗಳ ಮಾಹಿತಿಗಾಗಿ

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.

Scanned with CamScanner